# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | 850 (972) |
| **ಮಾನ್ಯ ಸದಸ್ಯರ ಹೆಸರು** | **ಶ್ರೀ ಸುನೀಲ್ ವಲ್ಯಾಪುರ<br>(ವಿಧಾನಸಭಾ ಕ್ಷೇತ್ರದಿಂದ)** |
| **ಉತ್ತರಿಸಬೇಕಾದ ದಿನಾಂಕ** | **24/02/2022** |
| **ಉತ್ತರಿಸುವ ಸಚಿವರು** | **ಮಾನ್ಯ ಕಾರ್ಮಿಕ ಸಚಿವರು** |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಾರ್ಮಿಕರ ಕಲ್ಯಾಣಕ್ಕಾಗಿ ಸರ್ಕಾರವು ರೂಪಿಸಿರುವ ಕಾರ್ಯಕ್ರಮಗಳೇನು; (ವಿವರ ನೀಡುವುದು) | ಕಾರ್ಮಿಕ ಇಲಾಖೆಯ ಅಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ವಿವಿಧ ಮಂಡಳಿಗಳಲ್ಲಿ ಕಾರ್ಮಿಕರ ಕಲ್ಯಾಣಕ್ಕಾಗಿ ರೂಪಿಸಿರುವ ಕಾರ್ಯಕ್ರಮಗಳ ವಿವರಗಳು ಈ ಕೆಳಕಂಡಂತಿರುತ್ತದೆ.<br><br>**1. ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ**<br><br>ಈ ಮಂಡಳಿಯವತಿಯಿಂದ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಮತ್ತು ಅವರ ಅವಲಂಬಿತರಿಗಾಗಿ ರೂಪಿಸಿರುವ ವಿವಿಧ 19 ರೀತಿಯ ಕಲ್ಯಾಣ ಮತ್ತು ಸಮಾಜಿಕ ಭದ್ರತಾ ಸೌಲಭ್ಯಗಳ ವಿವರವನ್ನು **ಅನುಬಂಧ-1**ರಲ್ಲಿ ಸಲ್ಲಿಸಿದೆ.<br><br>**2. ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ**<br><br>ಈ ಮಂಡಳಿಯು ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸಲು ಈ ಕೆಳಕಂಡ ಯೋಜನೆಗಳನ್ನು ಜಾರಿಗೊಳಿಸುತ್ತಿದೆ.<br><br>**(i) ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ:-** ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರಿಗೆ ಸಂಬಂಧಪಟ್ಟಂತೆ ಯೋಜನೆಯಡಿ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br><br>**ಅ)ಅಪಘಾತ ಪರಿಹಾರ ಸೌಲಭ್ಯ:** ಈ ಯೋಜನೆಯಡಿ, ಅಪಘಾತದಿಂದ ಮರಣ ಹೊಂದಿದ ಪ್ರಕರಣಗಳಲ್ಲಿ ನಾಮನಿರ್ದೇಶಿತರಿಗೆ ರೂ. 5 ಲಕ್ಷದ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ ಪ್ರಕರಣಗಳಲ್ಲಿ ಫಲಾನುಭವಿಗೆ ರೂ.2 ಲಕ್ಷದ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.1 ಲಕ್ಷದವರೆಗೆ ಚಿಕಿತ್ಸಾ ವೆಚ್ಚದ ಮರುಪಾವತಿ ನೀಡಲಾಗುತ್ತಿದೆ. |

| | | |
|---|---|---|
| | | (ಆ) **ಶೈಕ್ಷಣಿಕ ಧನ ಸಹಾಯ** : ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಗರಿಷ್ಠ ಇಬ್ಬರು ಮಕ್ಕಳಿಗೆ ಪದವಿಪೂರ್ವ ವ್ಯಾಸಂಗದವರೆಗೆ ವಾರ್ಷಿಕ ತಲಾ ರೂ.10,000/-ಗಳ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದೆ.<br><br>**(ii) ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-**<br>ಈ ಯೋಜನೆಯಡಿ 11 ಅಸಂಘಟಿತ ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ"ರನ್ನು ನೋಂದಾಯಿಸಿ ಸ್ಮಾರ್ಟ್ ಕಾರ್ಡ್/ಗುರುತಿನ ಚೀಟಿ ಮಾತ್ರ ವಿತರಿಸಲಾಗುತ್ತಿದೆ. ಯಾವುದೇ ಆರ್ಥಿಕ ಸೌಲಭ್ಯಗಳನ್ನು ನೀಡಲಾಗುತ್ತಿಲ್ಲ.<br><br>**(iii) ಇ-ಶ್ರಮ್ ಕಾರ್ಯಕ್ರಮ:-**<br>ಕೇಂದ್ರ ಸರ್ಕಾರವು ಅಸಂಘಟಿತ ಕಾರ್ಮಿಕರ ಸಮಗ್ರ ರಾಷ್ಟ್ರೀಯ ದತ್ತಾಂಶ (NDUW-National Database for Unorganised Worker) ಕ್ರೋಢೀಕರಿಸಲು ಉದ್ದೇಶಿಸಿದ್ದು, ಸಾಮಾನ್ಯ ಸೇವಾ ಕೇಂದ್ರಗಳ (CSC) ಸಹಯೋಗದೊಂದಿಗೆ ದಿನಾಂಕ:26-08-2021ರಿಂದ ಸುಮಾರು 379 ವರ್ಗಗಳ ಅಸಂಘಟಿತ ವರ್ಗಗಳ ಕಾರ್ಮಿಕರನ್ನು ಇ-ಶ್ರಮ್ ಪೋರ್ಟಲ್ ಮೂಲಕ ನೋಂದಾಯಿಸಲಾಗುತ್ತಿದೆ.<br>ಈ ಯೋಜನೆಯಡಿ ನೋಂದಣಿಯಾಗುವ ಕಾರ್ಮಿಕರು ಒಂದು ವರ್ಷದ ಅವಧಿಗೆ ಪ್ರಧಾನ ಮಂತ್ರಿ ಸುರಕ್ಷಾ ಭೀಮಾ ಯೋಜನೆಯಡಿ ರೂ.2.00 ಲಕ್ಷಗಳವರೆಗೆ ಅಪಘಾತ ವಿಮೆಯನ್ನು ಪಡೆಯಬಹುದಾಗಿರುತ್ತದೆ ಹಾಗೂ ಒಂದು ವರ್ಷದ ವಿಮಾ ಪ್ರೀಮಿಯಂ ಮೊತ್ತವನ್ನು ಕೇಂದ್ರ ಸರ್ಕಾರವು ಭರಿಸುವುದು.<br><br>**3.ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ** |
| | | ಈ ಮಂಡಳಿಯಲ್ಲಿ ಸಂಘಟಿತ ಕಾರ್ಮಿಕರಿಗಾಗಿ ಕಲ್ಯಾಣ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದೆ. ಮಂಡಳಿಗೆ ಪ್ರತಿ ಕಾರ್ಮಿಕರಿಂದ ರೂ 20/- ಮತ್ತು ಪ್ರತಿ ಕಾರ್ಮಿಕರಿಗೆ ಮಾಲೀಕರಿಂದ ರೂ 40- ರಂತೆ ವಂತಿಕೆ ಪಾವತಿಸುವ ಸಂಘಟಿತ ಕಾರ್ಮಿಕರು ಹಾಗೂ ಅವರ ಅವಲಂಬಿತರಿಗೆ ಕಲ್ಯಾಣ ಯೋಜನೆಗಳಡಿ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುವುದು.<br><br>(20:40:20 ದರದಲ್ಲಿ ಕಾರ್ಮಿಕರಿಂದ ರೂ 20/- ಮಾಲೀಕರು/ಸಂಸ್ಥೆಯಿಂದ ರೂ 40/- ಹಾಗೂ ಸರ್ಕಾರದಿಂದ ರೂ 20/- ದಲ್ಲಿ ವಂತಿಕೆಯು ಮಂಡಳಿಯು ಸ್ವೀಕರಿಸುತ್ತದೆ) |

| | | |
|---|---|---|
| | | 1) ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ.<br>2) ಕಾರ್ಮಿಕರಿಗೆ ವೈದ್ಯಕೀಯ ನೆರವು.<br>3) ಕಾರ್ಮಿಕರಿಗೆ ಅಪಘಾತ ಧನ ಸಹಾಯ.<br>4) ಹೆರಿಗೆ ಭತ್ಯೆ ಸೌಲಭ್ಯ<br>5) ಮೃತ ಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ<br>6) ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್/ಸಂಸ್ಥೆಗಳಿಗೆ ಧನಸಹಾಯ<br>7) ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನಸಹಾಯ |
| ಆ) | ಸರ್ಕಾರವು ಯಾವ ಯಾವ ರೀತಿಯ ಕಾರ್ಮಿಕರನ್ನು ಗುರುತಿಸಿದೆ; ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಇಂತಹ ಎಷ್ಟು ಕಾರ್ಮಿಕರನ್ನು ಗುರುತಿಸಿದೆ ಮತ್ತು ಅವರಿಗಾಗಿ ಸರ್ಕಾರವು ರೂಪಿಸಿರುವ ಯೋಜನೆಗಳನ್ನು ತಲುಪಿಸಲು ಅನುಸರಿಸುತ್ತಿರುವ ಕ್ರಮಗಳೇನು; (ವಿವರ ನೀಡುವುದು) | **1. <u>ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಮಂಡಳಿ</u>**<br>ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಲ್ಲಿ ಈ ಕೆಳಕಂಡ ವಿವಿಧ ವರ್ಗದಲ್ಲಿ ಕೆಲಸ ನಿರ್ವಹಿಸುವ ಕಾರ್ಮಿಕರನ್ನು ಮಂಡಳಿಯ ಫಲಾನುಭವಿಗಳಗಿ ನೋಂದಣಿ ಮಾಡಿಸಲಾಗುತ್ತಿದೆ.<br>1.ನಿರ್ಮಾಣ 2.ಮಾರ್ಪಾಡು 3.ರಿಪೇರಿ 4.ನಿರ್ವಹಣೆ ಅಥವಾ ಕಟ್ಟಡ ಕೆಡವುವಿಕೆಗೆ ಸಂಬಂಧಿಸಿದ ಕಾಮಗಾರಿ 5.ಕಟ್ಟಡಗಳು 6.ಬೀದಿಗಳು 7.ರಸ್ತೆಗಳು 8.ರೈಲ್ವೆಗಳು 9. ಟ್ರಾಮ್‌ವೇಗಳು 10. ಏರ್‌ಫೀಲ್ಡ್ಸ್ 11. ನೀರಾವರಿ ಚರಂಡಿ 12. ಏರಿ/ಕಟ್ಟೆಕಟ್ಟುವುದು ಮತ್ತು ನೌಕಾ ಕಾಮಗಾರಿಗಳು 13. ಪ್ರವಾಹ ನಿಯಂತ್ರಣ ಕಾಮಗಾರಿಗಳು (ಮಳೆ ನೀರು, ಚರಂಡಿ ಕಾಮಗಾರಿಗಳು ಸೇರಿ) 14. ವಿದ್ಯುತ್ ಉತ್ಪಾದನೆ 15. ಪ್ರಸರಣ ಮತ್ತು ವಿತರಣೆ 16. ಜಲ ಕಾಮಗಾರಿಗಳು (ನೀರು ವಿತರಣಾ ನಾಲೆಗಳು ಸೇರಿ) 17. ತೈಲ ಮತ್ತು ಅನಿಲ ಸ್ಥಾವರಗಳು 18. ವಿದ್ಯುತ್ ಮಾರ್ಗಗಳು 19. ವೈರ್‌ಲೆಸ್ 20. ರೇಡಿಯೋ 21. ದೂರದರ್ಶನ 22. ದೂರವಾಣಿ 23. ದೂರಸಂಪರ್ಕ ಮತ್ತು ಸಮುದ್ರ ಸಂವಹನಗಳಿಗೆ ಸಂಬಂಧಿಸಿದ ನಿರ್ಮಾಣ/ನವೀಕರಣ ಮತ್ತು ದುರಸ್ತಿ 24. ಅಣೆಕಟ್ಟುಗಳು 25. ನಾಲೆಗಳು 26. ಜಲಾಶಯಗಳು 27. ಜಲ ಮೂಲಗಳು 28. ಸುರಂಗಗಳು 29. ಸೇತುವೆಗಳು 30. ವಯಾಡಕ್ಟ್ಸ್ 31. ಆಕ್ವೆಡಕ್ಟ್ಸ್ 32. ಕೊಳವೆ ಮಾರ್ಗಗಳ ನಿರ್ಮಾಣ 33. ಸ್ಥಾವರಗಳು 34. ಕೂಲಿಂಗ್ ಟವರ್‌ಗಳು ಮತ್ತು ಪ್ರಸರಣ ಸ್ಥಾವರಗಳು **ಹೆಚ್ಚುವರಿ ನಿರ್ಮಾಣ ಕೆಲಸಗಳು:** 35.ಕಲ್ಲು ಗಣಿಗಾರಿಕೆ ಕಾಯ್ದೆ 1952ರ ವ್ಯಾಪ್ತಿಗೆ ಒಳಪಡದ ರಸ್ತೆ ಮತ್ತು ಕಟ್ಟಡ ನಿರ್ಮಾಣದ ಕಲ್ಲು ಕೆಲಸ 36. ನಿರ್ಮಾಣದಲ್ಲಿ ಚಪ್ಪಡಿ/ಟೈಲ್‌ಗಳನ್ನು ಅಳವಡಿಸುವುದು 37. ಯುಜಿಡಿ |

| | | |
|---|---|---|
| | | ನಿರ್ಮಾಣ ಸೇರಿದಂತೆ ಒಳಚರಂಡಿ ಮತ್ತು ಪ್ಲಂಬಿಂಗ್ ಕೆಲಸ 38. ವೈರಿಂಗ್, ವಿತರಣೆ ಪ್ಯಾನಲ್ ಫಿಕ್ಸಿಂಗ್ ಇತ್ಯಾದಿಗಳನ್ನು ಒಳಗೊಂಡ ವಿದ್ಯುತ್ ಕೆಲಸ 39. ಕೂಲಿಂಗ್ ಮತ್ತು ಹೀಟಿಂಗ್ ಸಿಸ್ಟಂಗಳ ಸ್ಥಾಪನೆ ಮತ್ತು ಅಳವಡಿಕೆ 40. ಲಿಫ್ಟ್, ಎಸ್ಕಲೇಟರ್ ಇತ್ಯಾದಿಗಳ ಸ್ಥಾಪನೆ 41. ಸೆಕ್ಯೂರಿಟಿ ಗೇಟಗಳ ಸ್ಥಾಪನೆ 42. ಕಬ್ಬಿಣ/ಲೋಹದ ಗ್ರಿಲ್‌ಗಳು, ಕಿಟಕಿ, ಬಾಗಿಲುಗಳ ಸ್ಥಾಪನೆ 43. ನೀರಿನ ಕೊಯ್ಲು ರಚನೆಗಳ ನಿರ್ಮಾಣ 44. ಫ್ಲೋರಿಂಗ್, ಫಾಲ್ಸ್‌ಸೀಲಿಂಗ್, ವಾಲ್ ಪ್ಯಾನಲಿಂಗ್ ಮುಂತಾದವುಗಳನ್ನು ಒಳಗೊಂಡ ಒಳಾಂಗಣ ವಿನ್ಯಾಸ 45. ಕಟ್ಟಡ ನಿರ್ಮಾಣ ಸಂದರ್ಭದಲ್ಲಿ ಅಳವಡಿಸುವ ಗ್ಲಾಸ್ ಪ್ಯಾನಲ್‌ಗಳು, ಎಸಿಪಿ ಶೀಟ್‌ಗಳು, ಸ್ಪೈಡರ್ ಗ್ಲೇಜಿಂಗ್‌ಗಳು 46.ಪ್ರೀ-ಫ್ಯಾಬ್ರಿಕೇಟೆಡ್ ಕಾಂಕ್ರೀಟ್ ಮಾಡ್ಯೂಲ್ಸ್, ಕಾಂಕ್ರೀಟ್ ಬ್ರಿಕ್ಸ್, ಬ್ಲಾಕ್ಸ್, ಹಾಲೋಬ್ಲಾಕ್ಸ್, ಟೈಲ್ಸ್ ಮುಂತಾದವುಗಳ ಅಳವಡಿಕೆ 47.ಸಿಗ್ನೇಜ್, ರಸ್ತೆ ಪೀಠೋಪಕರಣಗಳು, ಬಸ್ ಆಶ್ರಯಗಳು/ ಸ್ಟ್ಯಾಂಡ್, ಸಿಗ್ನಲಿಂಗ್ ಸಿಸ್ಟಮ್ಸ್ ಮುಂತಾದವುಗಳ ನಿರ್ಮಾಣ 48.ರೋಟರಿಗಳ ನಿರ್ಮಾಣ ಮತ್ತು ಸ್ಥಾಪನೆ, ಕಾರಂಜಿಗಳು, ಸಾರ್ವಜನಿಕ ಉದ್ಯಾನವನ ಮತ್ತು ತೋಟಗಳಲ್ಲಿ ಈಜುಕೊಳಗಳು ಇತ್ಯಾದಿಗಳ ಅಳವಡಿಕೆ 49. ನಿರ್ಮಾಣ ಉದ್ದೇಶಗಳಿಗಾಗಿ ಭೂಮಿಯ ಕೆಲಸ, ಭೂಮಿಯ ಹರಡುವಿಕೆ, ನೆಲಸಮಗೊಳಿಸುವಿಕೆ ಮತ್ತು ಭೂಮಿಯ ಕತ್ತರಿಸುವಿಕೆ ಇತ್ಯಾದಿ ಕೆಲಸಗಳು 50. ತಾತ್ಕಾಲಿಕ ಆಶ್ರಯ ತಾಣಗಳ ನಿರ್ಮಾಣ ಮತ್ತು ಅಳವಡಿಕೆ 51. ಫಿಲಂಸೆಟ್‌ಗಳ ನಿರ್ಮಾಣ ಮತ್ತು ಅಳವಡಿಕೆ 52. ಸರ್ಕಾರದ ಅಧಿಸೂಚನೆ ಸಂಖ್ಯೆ ಕಾಇ 220 ಎಲ್‌ಇಟಿ 2013, ದಿನಾಂಕ 30-11-2013 ರಲ್ಲಿ Cutting Breaking and Crushing of Stone ಕೆಲಸಗಳನ್ನು ಸಹ ಕಟ್ಟಡ ಮತ್ತು ಇತರೆ ನಿರ್ಮಾಣ ಕೆಲಸಗಳೆಂದು ಪರಿಗಣಿಸಿದೆ.<br><br>ಕಲಬುರ್ಗಿ ಜಿಲ್ಲೆಯಲ್ಲಿ 2,14,165 ಮತ್ತು ಯಾದಗಿರಿ ಜಿಲ್ಲೆಯಲ್ಲಿ 87,190 ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಮಂಡಳಿಯ ಫಲಾನುಭವಿಗಳಗಿ ನೋಂದಣಿಯಾಗಿರುತ್ತಾರೆ. ಮಂಡಳಿಯು ರೂಪಿಸಿರುವ ಸೌಲಭ್ಯಗಳನ್ನು ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ತಲುಪಿಸುವ ನಿಟ್ಟಿನಲ್ಲಿ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ:<br><br>ಮಂಡಳಿಯ ಸೌಲಭ್ಯಗಳ ಶೀಘ್ರ ವಿಲೇವಾರಿಗಾಗಿ ಮಂಜೂರಾತಿ ಅಧಿಕಾರವನ್ನು ಕ್ಷೇತ್ರ ಕಛೇರಿಗೆ ನೀಡಲಾಗಿದ್ದು, ಹೆಚ್ಚಿನ ಅರ್ಜಿಗಳು ಬಾಕಿಯಿರುವ ಜಿಲ್ಲೆಗಳಿಗೆ ಮಂಡಳಿ ವತಿಯಿಂದ ಅಧಿಕಾರಿಗಳ ತಂಡವನ್ನು ರಚಿಸಿ, ಕ್ಷೇತ್ರ ಕಛೇರಿಗೆ ಭೇಟಿ ನೀಡಿ ವಿಲೇವಾರಿ ಮಾಡಿಸಲು ಕ್ರಮವಹಿಸಲಾಗುತ್ತಿದೆ. |

ವಿವಿಧ ಸೌಲಭ್ಯಗಳ ಕ್ಲೇಮ್ ಅರ್ಜಿಗಳನ್ನು ಸುಲಲಿತವಾಗಿ ವಿಲೇವಾರಿ ಮಾಡಲು ಸೇವಾ ಸಿಂಧು ತಂತ್ರಾಂಶದ ಮೂಲಕ ಆನ್ ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಶೈಕ್ಷಣಿಕ ಸಹಾಯ ಧನದ ಸೌಲಭ್ಯವನ್ನು ಅತ್ಯಂತ ಶೀಘ್ರವಾಗಿ ಫಲಾನುಭವಿಗಳಿಗೆ ತಲುಪಿಸುವ ನಿಟ್ಟಿನಲ್ಲಿ ಅರ್ಜಿಗಳನ್ನು ಎಸ್‌ಎಸ್‌ಪಿ (State scholarship portal) ಪೋರ್ಟಲ್ ಮುಖಾಂತರ ಸ್ವೀಕರಿಸಿ, ವಿಲೇವಾರಿ ಮಾಡಲಾಗುತ್ತಿದೆ.

ಅಲ್ಲದೆ ರಾಜ್ಯದಾದ್ಯಂತ ಕ್ಷೇತ್ರ ಕಛೇರಿಯ ಅಧಿಕಾರಿಗಳು ಹಾಗೂ ಸಿಬ್ಬಂಧಿಗಳಿಗೆ ಒಂದು ದಿನದ ಕಾರ್ಯಾಗಾರವನ್ನು ಏರ್ಪಡಿಸಿ ಕ್ಲೇಮ್ ವಿಲೇವಾರಿ ಕುರಿತು ತರಬೇತಿ ನೀಡಲಾಗಿದ್ದು, ಸದರಿ ಕಾರ್ಯಗಾರಗಳಲ್ಲಿ ಬಾಕಿಯಿರುವ ಅರ್ಜಿಗಳನ್ನು ಶೀಘ್ರವಾಗಿ ವಿಲೇವಾರಿ ಮಾಡುವಂತೆಯು ಸಹ ಆಗ್ಗಿಂದಾಗೆ ಮಾರ್ಗದರ್ಶನ ನೀಡಲಾಗಿರುತ್ತದೆ.

ಆಲ್ಲದೇ ಮಂಡಳಿಯ ಫಲಾನುಭವಿಗಳ ನೋಂದಣಿ ಮತ್ತು ಅವರಿಗೆ ವಿತರಿಸುತ್ತಿರುವ ಸೌಲಭ್ಯಗಳ ಕುರಿತು ಜಾಗೃತಿ ಮೂಡಿಸಲು ರಾಜ್ಯದಾದ್ಯಂತ ಐಇಸಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

2. **<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ</u>**

ಕರ್ನಾಟಕ ರಾಜ್ಯ ಸರ್ಕಾರವು ಅಸಂಘಟಿತ ವಲಯದ ಒಟ್ಟು 43 ವರ್ಗಗಳ ಕಾರ್ಮಿಕರನ್ನು ಅಸಂಘಟಿತ ಕಾರ್ಮಿಕರೆಂದು ಗುರುತಿಸಿದೆ. ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗೆ ಸಂಬಂಧಿಸಿದಂತೆ ಉಪ ಪ್ರಶ್ನೆ (ಅ)ದಲ್ಲಿ ನಮೂದಿಸಿರುವ ಯೋಜನೆಗಳಡಿ ನೋಂದಾಯಿತರಾಗಿರುವ ವಿವಿಧ ವರ್ಗಗಳ ಅಸಂಘಟಿತ ಕಾರ್ಮಿಕರ ವಿವರ ಈ ಕೆಳಕಂಡಂತಿದೆ.

| ಕ್ರ ಸಂ. | **ಯೋಜನೆ** | **ಕಲಬುರಗಿ** | **ಯಾದಗಿರಿ** |
|---|---|---|---|
| 01 | ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ* (ಸಾರಿಗೆ ಇಲಾಖೆಯ ದತ್ತಾಂಶದ ಪ್ರಕಾರ). | 27,470 | 7,291 |
| 02 | ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ. | 4,227 | 3,234 |

| | | | |
|---|---|---|---|
| 03 | ಇ-ಶ್ರಮ್ ಕಾರ್ಯಕ್ರಮ. | 2,63,976 | 99,951 |
| 04 | ಕೋವಿಡ್-19ರ ಕಾರಣ ಮೊದಲನೇ ಹಾಗೂ ಎರಡನೇ ಅಲೆಯಲ್ಲಿ ಒಂದು ಬಾರಿ ನೆರವು ಕೋರಿ ಅರ್ಜಿ ಸಲ್ಲಿಸಿದ 11 ವರ್ಗಗಳ ಅಸಂಘಟಿತ ಕಾರ್ಮಿಕರ ಸಂಖ್ಯೆ. | 1,29,287 | 31,601 |
| | **ಒಟ್ಟು** | **4,24,960** | **1,42,077** |

**ಮಂಡಳಿಯು ಜಾರಿಗೊಳಿಸುತ್ತಿರುವ ಯೋಜನೆಗಳನ್ನು ಕಾರ್ಮಿಕರಿಗೆ ತಲುಪಿಸಲು ಅನುಸರಿಸುತ್ತಿರುವ ಕ್ರಮಗಳು;**

- ಕರಪತ್ರ, ದಿನ ಪತ್ರಿಕೆ, ಬ್ಯಾನರ್ಸ್, ಹಾಗೂ ಹೋರ್ಡಿಂಗ್‌ಗಳ ಮೂಲಕ ಪ್ರಚಾರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.
- ಮಂಡಳಿಯು ಜಾರಿಗೊಳಿಸುತ್ತಿರುವ ಯೋಜನೆಗಳ ಕುರಿತಾಗಿ ಕಾರ್ಮಿಕ ಇಲಾಖೆಯು ಕಾನೂನು ಸೇವಾ ಪ್ರಾಧಿಕಾರ ಹಾಗೂ ಇತರ ಸಂಘ ಸಂಸ್ಥೆಗಳ ಸಹಯೋಗದೊಂದಿಗೆ ಅರಿವು-ನೆರವು ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ.
- ಕಾರ್ಮಿಕ ಇಲಾಖೆ ಹಾಗೂ ಅದರ ಅಧೀನದಲ್ಲಿ ಬರುವ ಮಂಡಳಿ ಹಾಗೂ ಸೊಸೈಟಿಗಳು ಜಾರಿಗೊಳಿಸುತ್ತಿರುವ ಯೋಜನೆಗಳ ಬಗ್ಗೆ ಮಾಹಿತಿಯನ್ನು ಕಾರ್ಮಿಕ ಸಹಾಯವಾಣಿ 155214 ಮೂಲಕ ನೀಡಲಾಗುತ್ತಿದೆ.
- ಮಂಡಳಿಯು ಜಾರಿಗೊಳಿಸುತ್ತಿರುವ ಯೋಜನೆಗಳು/ಕಾರ್ಯಕ್ರಮಗಳ ಕುರಿತಾಗಿ ಕಾರ್ಮಿಕರಿಗೆ ಮಾಹಿತಿ ನೀಡಿ ಸಹಕರಿಸುವ ಸದುದ್ದೇಶದಿಂದ ರಾಜ್ಯದ ಬಹುತೇಕ ಎಲ್ಲಾ ತಾಲ್ಲೂಕುಗಳಲ್ಲಿ ಕಾರ್ಮಿಕ ಸೇವಾ ಕೇಂದ್ರಗಳನ್ನು ತೆರೆಯಲಾಗಿದ್ದು, ಸದರಿ ಕೇಂದ್ರಗಳ ಮೂಲಕ ಸೇವೆ ಒದಗಿಸಲಾಗುತ್ತಿದೆ.
- ಸಾಮಾನ್ಯ ಸೇವಾ ಕೇಂದ್ರಗಳು ಹಾಗೂ ಭಾರತೀಯ ಅಂಚೆ ಇಲಾಖೆಯ ಸಹಯೋಗದೊಂದಿಗೆ ಇ-ಶ್ರಮ್ ಪೋರ್ಟಲ್‌ನಡಿ ಅಸಂಘಟಿತ ಕಾರ್ಮಿಕರನ್ನು ನೋಂದಾಯಿಸಲು ನೋಂದಣಿ ಕ್ಯಾಂಪ್‌ಗಳನ್ನು ನಡೆಸಲಾಗುತ್ತಿದೆ.

3. **ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ**

ಈ ಮಂಡಳಿಯಲ್ಲಿ ಸಂಘಟಿತ ಕಾರ್ಮಿಕರನ್ನು ನೊಂದಾಯಿಸುವ ವ್ಯವಸ್ಥೆ ಇರುವುದಿಲ್ಲ. ಆದರೆ ಈ ಮಂಡಳಿಯಲ್ಲಿ ಸಂಘಟಿತ ಕಾರ್ಮಿಕರಿಗಾಗಿ ಕಲ್ಯಾಣ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದೆ. ಮಂಡಳಿಗೆ ಪ್ರತಿ ಕಾರ್ಮಿಕರಿಂದ ರೂ

| | | |
|---|---|---|
| | | 20/- ಮತ್ತು ಪ್ರತಿ ಕಾರ್ಮಿಕರಿಗೆ ಮಾಲೀಕರಿಂದ ರೂ 40- ರಂತೆ ವಂತಿಕೆ ಪಾವತಿಸುವ ಸಂಘಟಿತ ಕಾರ್ಮಿಕರು ಹಾಗೂ ಅವರ ಅವಲಂಬಿತರಿಗೆ ಕಲ್ಯಾಣ ಯೋಜನೆಗಳಡಿ ಈ ಸೌಲಭ್ಯಗಳನ್ನು ನೀಡಲಾಗುವುದು.<br>ಕಾರ್ಮಿಕರಿಗೆ ಕಲ್ಯಾಣ ಯೋಜನೆಗಳ ಬಗ್ಗೆ ಅರಿವು ಮೂಡಿಸಲು ಕ್ಯಾಲೆಂಡರ್, ಕರಪತ್ರಗಳು, ಬ್ಯಾನರ್‌ಗಳನ್ನು ಅಳವಡಿಸುವುದು, ಪತ್ರಿಕಾ ಪ್ರಕಟಣೆ ಮೂಲಕ ಹಾಗೂ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚಾರಪಡಿಸಲಾಗಿದೆ. |
| ಇ) | ಕಳೆದ 3 ವರ್ಷಗಳಿಂದ ಸರ್ಕಾರದಿಂದ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ಕಾರ್ಮಿಕ ಇಲಾಖೆಗೆ ಬಿಡುಗಡೆಯಾದ ಅನುದಾನ ಎಷ್ಟು; ಈ ಅನುದಾನವನ್ನು ಯಾವ ಯಾವ ಉದ್ದೇಶಗಳಿಗಾಗಿ ಖರ್ಚು ಮಾಡಲಾಗಿದೆ? (ವಿವರ ನೀಡುವುದು). | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಕಾರ್ಮಿಕ ಇಲಾಕೆಗೆ ಸಂಬಂಧಿಸಿದಂತೆ ಸರ್ಕಾರದಿಂದ ಯಾವುದೇ ಅನುದಾನವು ನೇರವಾಗಿ ಬಿಡುಗಡೆಯಾಗುವುದಿಲ್ಲ. ವಿಧಾನ ಸಭಾ ಕ್ಷೇತ್ರಾವಾರು ಅಥವಾ ತಾಲ್ಲೂಕುವಾರು ಆಯವ್ಯಯ ಬಿಡುಗಡೆ ಮಾಡುವ ಪದ್ಧತಿ ಇರುವುದಿಲ್ಲ.<br>ಆದರೆ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಕಾರ್ಮಿಕ ಇಲಾಖೆಗೆ ಸಂಬಂಧಿಸಿದಂತೆ ಆಡಳಿತಾತ್ಮಕ ಹಾಗೂ ಇನ್ನಿತರೆ ವೆಚ್ಚಗಳನ್ನು ಭರಿಸಲು ಕಾರ್ಮಿಕ ಆಯುಕ್ತಾಲಯದಿಂದ ಅನುದಾನ ಬಿಡುಗಡೆ ಮಾಡಲಾಗುತ್ತದೆ.<br>**1. ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಮಂಡಳಿ**<br>ಈ ಮಂಡಳಿಗೆ ಸರ್ಕಾರದಿಂದ ಯಾವುದೇ ಅನುದಾನ ಬಿಡುಗಡೆಯಾಗುವುದಿಲ್ಲ. ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಗಳಿಂದ ಸ್ವೀಕೃತವಾಗುವ ಶೇ. 1 ಸುಂಕ ಮೊತ್ತದಿಂದ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳಡಿ ಕೋರಿ ಫಲಾನುಭವಿಗಳಿಂದ ಘಟನೆಗಳ ಆಧಾರದ ಮೇಲೆ ಸ್ವೀಕೃತವಾದ ಅರ್ಜಿಗಳಿಗೆ ಮಂಡಳಿಯ ವತಿಯಿಂದ ಸಹಾಯ ಧನ ಬಿಡುಗಡೆ ಮಾಡಲಾಗುತ್ತಿದೆ.<br>ಈ ಸುಂಕ ಮೊತ್ತದಿಂದ ಕಲಬುರ್ಗಿ ಜಿಲ್ಲೆಯ 14,631 ನೋಂದಾಯಿತ ಫಲಾನುಭವಿಗಳಿಗೆ ರೂ. 11,76,05,431/- ಗಳಷ್ಟು ಸಹಾಯ ಧನ ಮತ್ತು ಯಾದಗಿರಿ ಜಿಲ್ಲೆಯ 8,357 ನೋಂದಾಯಿತ ಫಲಾನುಭವಿಗಳಿಗೆ ರೂ. 9,93,23,010/-ಗಳಷ್ಟು ಸಹಾಯ ಧನವನ್ನು ವಿವಿಧ ಕಲ್ಯಾಣ ಮತ್ತು ಸಮಾಜಿಕ ಭದ್ರತ ಸೌಲಭ್ಯಗಳಡಿ ವಿತರಿಸಲಾಗಿದೆ.<br><br>**2.<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ</u>**<br><br>ಈ ಮಂಡಳಿಯ ಮೂಲಕ ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸುವ ಉದ್ದೇಶದಿಂದ ಜಾರಿಗೊಳಿಸುತ್ತಿರುವ |

ಯೋಜನೆಗಳಡಿ ಜಿಲ್ಲಾವಾರು ಪ್ರತ್ಯೇಕ ಅನುದಾನ ಹಂಚಿಕೆಯಾಗಿರುವುದಿಲ್ಲ. ಆದರೆ, ಅಸಂಘಟಿತ ಕಾರ್ಮಿಕರ ಅಭಿವೃದ್ಧಿಗಾಗಿ ರಾಜ್ಯಾದ್ಯಂತ ಈ ಮಂಡಳಿಯು ಜಾರಿಗೊಳಿಸುತ್ತಿರುವ ಯೋಜನೆಗಳಡಿ ಕಳೆದ ಮೂರು ವರ್ಷಗಳಲ್ಲಿ ರಾಜ್ಯ ಸರ್ಕಾರದಿಂದ ಮಂಡಳಿಗೆ ಬಿಡುಗಡೆಯಾದ ಮತ್ತು ವೆಚ್ಚವಾದ ಅನುದಾನದ ವಿವರ ಈ ಕೆಳಗಿನಂತಿದೆ.

(ರೂ. ಲಕ್ಷಗಳಲ್ಲಿ)

| ಯೋಜನೆಯ ಹೆಸರು | 2019–20 | | 2020–21 | | 2021–22 | |
|---|---|---|---|---|---|---|
| | ಬಿಡುಗಡೆ | ವೆಚ್ಚ | ಬಿಡುಗಡೆ | ವೆಚ್ಚ | ಬಿಡುಗಡೆ | ವೆಚ್ಚ |
| ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ | 499.50 | 667.88 | 1.00 | 1001.35 | 1.00 | 871.54 |
| ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಮತ್ತು ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ | 1034.50 | 891.94 | 1.00 | 2791.22 | 5.00 | 305.91 |

***ಹೆಚ್ಚುವರಿ ವೆಚ್ಚವನ್ನು ಹಿಂದಿನ ಸಾಲುಗಳಲ್ಲಿ ಬಾಕಿ ಉಳಿದ ಅನುದಾನದಿಂದ ಭರಿಸಿದೆ.**

ಕಲಬುರಗಿ ಮತ್ತು ಯಾದಗಿರಿ ಸಂಬಂಧಿಸಿದಂತೆ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ಕಳೆದ ಮೂರು ವರ್ಷಗಳಲ್ಲಿ ವಿತರಿಸಿದ ಸೌಲಭ್ಯದ ವಿವರ ಈ ಕೆಳಗಿನಂತಿದೆ.

| | | |
|---|---|---|
| | | **1. <u>ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯಡಿ ಅಪಘಾತ ಪರಿಹಾರ:–</u>**<br><br>ಕಲಬುರಗಿ ಜಿಲ್ಲೆಯಲ್ಲಿ 05 ಅಪಘಾತ ಪ್ರಕರಣಗಳಲ್ಲಿ ರೂ.25.00 ಲಕ್ಷ ಪರಿಹಾರವನ್ನು ಹಾಗೂ ಯಾದಗಿರಿ ಜಿಲ್ಲೆಯಲ್ಲಿ 01 ಪ್ರಕರಣಗಳಲ್ಲಿ ರೂ.5.00 ಲಕ್ಷಗಳ ಅಪಘಾತ ಪರಿಹಾರವನ್ನು ನಾಮ ನಿರ್ದೇಶಿತರಿಗೆ ವಿತರಿಸಲಾಗಿದೆ.<br><br>**2. <u>ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:–</u>**<br><br>ಈ 11 ಅಸಂಘಟಿತ ವರ್ಗಗಳಾದ "ಹಮಾಲರು, ಮನೆಗೆಲಸದವರು, ಚಿಂದಿ ಆಯುವವರು, ಟೈಲರ್ಸ್, ಮೆಕ್ಯಾನಿಕ್, ಅಗಸರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು, ಕ್ಷೌರಿಕರು ಹಾಗೂ ಭಟ್ಟಿ ಕಾರ್ಮಿಕ"ರನ್ನು "ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ"ಯಡಿ ನೋಂದಾಯಿಸಲಾಗುತ್ತಿದ್ದು, ಯಾದಗಿರಿ ಜಿಲ್ಲೆಯಲ್ಲಿ 4,227 ಕಾರ್ಮಿಕರು ಹಾಗೂ ಯಾದಗಿರಿ ಜಿಲ್ಲೆಯಲ್ಲಿ 3,234 ಕಾರ್ಮಿಕರು ನೋಂದಾಯಿತರಾಗಿರುತ್ತಾರೆ. ಆದರೆ, ಯಾವುದೇ ಆರ್ಥಿಕ ಸೌಲಭ್ಯವನ್ನು ಒದಗಿಸುತ್ತಿರುವುದಿಲ್ಲ.<br><br>**3.<u>ಕೋವಿಡ್–19 ರ ವಿಶೇಷ ಪ್ಯಾಕೇಜ್:</u>**<br><br>**(ಅ) <u>ಕೋವಿಡ್–19 ರ ಮೊದಲನೆ ಅಲೆಯ ವಿಶೇಷ ಪ್ಯಾಕೇಜ್:</u>**<br>2020ನೇ ವರ್ಷದ ಕೋವಿಡ್–19ರ ಮೊದಲನೆ ಅಲೆಯ ಲಾಕ್‌ಡೌನ್ ಕಾರಣ ಸಂಕಷ್ಟಕ್ಕೊಳಗಾದ ಅಗಸ ಮತ್ತು ಕ್ಷೌರಿಕ ವೃತ್ತಿ ನಿರ್ವಹಿಸುತ್ತಿರುವ ಅಸಂಘಟಿತ ಕಾರ್ಮಿಕರಿಗೆ ಸನ್ಮಾನ್ಯ ಮುಖ್ಯಮಂತ್ರಿಯವರು ಘೋಷಿಸಿದ ತಲಾ ರೂ.5,000/–ಗಳ ಒಂದು ಬಾರಿಯ ನೆರವಿನ ವಿಶೇಷ ಪ್ಯಾಕೇಜ್ ಅಡಿ ಕಲಬುರಗಿ ಜಿಲ್ಲೆಯಲ್ಲಿ 5357 ಹಾಗೂ ಯಾದಗರಿ ಜಿಲ್ಲೆಯಲ್ಲಿ 3095 ಅರ್ಹ ಕಾರ್ಮಿಕರಿಗೆ ತಲಾ ರೂ.5,000/–ಗಳಂತೆ ಒಟ್ಟು ರೂ. 4.22 ಕೋಟಿ ನೆರವನ್ನು ಕಾರ್ಮಿಕರ ಬ್ಯಾಂಕ್ ಖಾತೆಗೆ ಡಿ.ಬಿ.ಟಿ ಮೂಲಕ ವಿತರಿಸಲಾಗಿದೆ.<br><br>**(ಆ) <u>ಕೋವಿಡ್–19 ರ ಎರಡನೆ ಅಲೆಯ ವಿಶೇಷ ಪ್ಯಾಕೇಜ್:</u>**<br>2021ನೇ ವರ್ಷದ ಕೋವಿಡ್–19ರ ಎರಡನೇ ಅಲೆಯ ಲಾಕ್‌ಡೌನ್ ಕಾರಣ ಸಂಕಷ್ಟಕ್ಕೊಳಗಾದ 11 ವರ್ಗಗಳಾದ ಅಸಂಘಟಿತ ಕಾರ್ಮಿಕರಾದ ಅಗಸರು, ಕ್ಷೌರಿಕರು, ಗೃಹಕಾರ್ಮಿಕರು, ಟೈಲರ್‌ಗಳು, ಮೆಕ್ಯಾನಿಕ್, ಚಿಂದಿ ಆಯುವವರು, ಹಮಾಲರು, ಅಕ್ಕಸಾಲಿಗರು, ಕಮ್ಮಾರರು, ಕುಂಬಾರರು ಹಾಗೂ ಭಟ್ಟಿಕಾರ್ಮಿಕರಿಗೆ ಸನ್ಮಾನ್ಯ ಮುಖ್ಯಮಂತ್ರಿಯವರು ಘೋಷಿಸಿದ ತಲಾ ರೂ. 2,000/–ಗಳ ಒಂದು ಬಾರಿಯ ನೆರವಿನ ವಿಶೇಷ ಪ್ಯಾಕೇಜ್ ಅಡಿ ಕಲಬುರಗಿ ಜಿಲ್ಲೆಯಲ್ಲಿ 78934 ಹಾಗೂ ಯಾದಗರಿ ಜಿಲ್ಲೆಯಲ್ಲಿ 22714 |

| | | |
|---|---|---|
| | | ಅರ್ಹ ಕಾರ್ಮಿಕರಿಗೆ ತಲಾ ರೂ.2,000/-ಗಳಂತೆ ಒಟ್ಟು ರೂ. 20.33 ಕೋಟಿ ನೇರವನ್ನು ಕಾರ್ಮಿಕರ ಬ್ಯಾಂಕ್ ಖಾತೆಗೆ ಡಿ.ಬಿ.ಟಿ ಮೂಲಕ ವಿತರಿಸಲಾಗಿದೆ.<br>**3.ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ**<br>ಸರ್ಕಾರದಿಂದ ಕಾರ್ಮಿಕ ಕಲ್ಯಾಣ ಮಂಡಳಿಗೆ ಲೆಕ್ಕ ಶೀರ್ಷಿಕೆ: 2230-01-103-4-00 (104) ರಲ್ಲಿ ಅಂಶಧನವನ್ನು ಬಿಡುಗಡೆ ಮಾಡುತ್ತದೆ. ಸರ್ಕಾರದಿಂದ ಮಂಡಳಿಗೆ ಜಿಲ್ಲಾವಾರು ಅನುದಾನ ಬಿಡುಗಡೆಯಾಗುವುದಿಲ್ಲ.<br>ಕಳೆದ 3 ವರ್ಷಗಳಲ್ಲಿ ಮಂಡಳಿಗೆ ಸರ್ಕಾರದಿಂದ ಬಿಡುಗಡೆಯಾದ ಅಂಶಧನದ ವಿವರ ಈ ಕೆಳಕಂಡಂತಿದೆ. |

| ಕ್ರ.ಸಂ | ವರ್ಷ | ಬಿಡುಗಡೆಯಾದ ಅಂಶಧನ (ರೂ. ಲಕ್ಷಗಳಲ್ಲಿ) |
|---|---|---|
| 1 | 2018-19 | 500.00 |
| 2 | 2019-20 | 718.00 |
| 3 | 2020-21 | 600.00 |

ಕಳೆದ 3 ವರ್ಷಗಳಲ್ಲಿ ಕಲಬುರ್ಗಿ ಮತ್ತು ಯಾದಗಿರಿ ಜಿಲ್ಲೆಗಳ ಸಂಘಟಿತ ಕಾರ್ಮಿಕರಿಗೆ ಕಲ್ಯಾಣ ಯೋಜನೆಗಳಡಿಯಲ್ಲಿ ಖರ್ಚು ಮಾಡಲಾದ ವಿವರಗಳನ್ನು **ಅನುಬಂಧ-2** ದಲ್ಲಿ ಲಗತ್ತಿಸಿದೆ

**4.ಬಾಲ ಕಾರ್ಮಿಕ ಯೋಜನಾ ಸೊಸೈಟಿ**

ಸರ್ಕಾರದಿಂದ ಬಾಲಕಾರ್ಮಿಕ ಯೋಜನೆಯಡಿ ನೇರವಾಗಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಿಗೆ ಸಂಬಂಧಪಟ್ಟಂತೆ ಯಾವುದೇ ಅನುದಾನವನ್ನು ಬಿಡುಗಡೆ ಮಾಡಿರುವುದಿಲ್ಲ. ಸರ್ಕಾರದಿಂದ ಇಲಾಖೆಗೆ ಬಿಡುಗಡೆಯಾದಂತ ಅನುದಾನವನ್ನು ಜಿಲ್ಲಾವಾರು ಮರುಹಂಚಿಕೆ ಮಾಡಿ ಬಿಡುಗಡೆ ಮಾಡಲಾಗಿದ್ದು, ಕಳೆದ 3 ವರ್ಷಗಳಿಂದ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಿಗೆ ಬಿಡುಗಡೆ ಮಾಡಲಾದ ಅನುದಾನದ ವಿವರಗಳು ಈ ಕೆಳಕಂಡಂತಿರುತ್ತವೆ;

| ಕ್ರ. ಸಂ. | ಜಿಲ್ಲೆಯ ಹೆಸರು | ವರ್ಷ | ಬಿಡುಗಡೆಯಾದ ಅನುದಾನ (ರೂ.ಗಳಲ್ಲಿ) |
|---|---|---|---|
| 1. | ಕಲಬುರಗಿ | 2018-19 | 5,87,000/- |
| | | 2019-20 | 5,50,334/- |
| | | 2020-21 | 6,59,994/- |
| 2. | ಯಾದಗಿರಿ | 2018-19 | 9,29,000/- |
| | | 2019-20 | 8,51,334/- |
| | | 2020-21 | 8,12,746/- |

- ಪ್ರತಿ ಪಂಚಾಯಿತಿಗಳಲ್ಲಿ, ವಾರ್ಡಗಳಲ್ಲಿ ಬಾಲ್ಯಾವಸ್ಥೆ ಮತ್ತು ಕಿಶೋರಾವಸ್ಥೆ ಕಾರ್ಮಿಕರ ಮುಕ್ತ ವಲಯಗಳನ್ನಾಗಿ ಮಾಡಲು

| | | |
|---|---|---|
| | | ವಿವಿಧ ಇಲಾಖೆಯ ಅಧಿಕಾರಿಗಳಿಗೆ ಹಾಗೂ ಸೆಕ್ಷನ್-17ರಡಿ ಮತ್ತು ಸೆಕ್ಷನ್-16ರಡಿ ನೇಮಕಗೊಂಡ ನಿರೀಕ್ಷಕರಿಗೆ ತರಬೇತಿ ಕಾರ್ಯಕ್ರಮಗಳನ್ನು ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಗಳ ಮೂಲಕ ಆಯೋಜಿಸಲಾಗುತ್ತಿದೆ.<br>• ಕರ್ನಾಟಕದಲ್ಲಿ ಬಾಲ್ಯಾವಸ್ಥೆಯ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ ಮುಕ್ತ ಜಿಲ್ಲೆಗಳ ಘೋಷಣೆಯನ್ನು ಮಾಡುವುದಕ್ಕಾಗಿ "MEMORANDUM OF STANDARD OPERATING PROCEDURES(SOPs) FOR DISTRICT ADMINISTRATION TO DECLARAE A DISTRICT AS "CHILD AND ADOLOSCENT LABOUR FREE ZONE-CALFZ" ಯ ಅನುಷ್ಠಾನಗೊಳಿಸಲಾಗುತ್ತಿದೆ.<br>ಬಾಲ್ಯಾವಸ್ಥೆಯ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ ಪದ್ಧತಿಯ ನಿರ್ಮೂಲನೆ ಕುರಿತು ವ್ಯಾಪಕವಾದ ಜಾಗೃತಿ ಮೂಡಿಸಲು ಬೀದಿನಾಟಕಗಳು, ಗೋಡೆ ಬರಹಗಳು, ಕರಪತ್ರಗಳು, ಆಟೋ ಪ್ರಚಾರಗಳು, ತರಬೇತಿ ಕಾರ್ಯಾಗಾರಗಳು, ಬಿತ್ತಿ ಪತ್ರಗಳು ಹಾಗೂ ಕಾನೂನು ಅರಿವು-ನೆರವು ಕಾರ್ಯಕ್ರಮಗಳ ನಿರಂತರ ಆಯೋಜನೆ ಹಾಗೂ ಸಾಂಪ್ರದಾಯಿಕ ಮಾಧ್ಯಮಗಳು ಹಾಗೂ ಆಧುನಿಕ ವಿದ್ಯುನ್ಮಾನ/ ಮುದ್ರಣ ಮಾಧ್ಯಮಗಳನ್ನು ಬಳಸಿಕೊಂಡು "ಅರಿವು-ನೆರವು" ಕಾರ್ಯವನ್ನು ಆಯಾ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ನಡೆಸಲಾಗುತ್ತಿದೆ. |

**ಕಾಇ 112 ಎಲ್ಇಟಿ 2022**

*(ಅರಬೈಲ್ ಶಿವರಾಂ ಹೆಬ್ಬಾರ್)*
*ಕಾರ್ಮಿಕ ಸಚಿವರು*

# ಅನುಬಂಧ-1

ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಸುನೀಲ್ ವಲ್ಯಾಪುರ್
ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 972

**ಮಂಡಳಿಯ ನೋಂದಾಯಿತ ಫಲಾನುಭವಿಗಳಿಗೆ ಸಿಗುವ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳು**

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ **60** ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ **ರೂ.2,000/-**
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ / ಪತ್ನಿ ಮಾಸಿಕ **ರೂ.1000/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ/ಭಾಗಶಃ ಅಂಗವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ.2,00,000/-** ದವರೆಗೆ ಅನುಗ್ರಹ ರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ (ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
5. **ಟ್ರೈನಿಂಗ್-ಕಮ್-ಟೂಲ್‌ಕಿಟ್ ಸೌಲಭ್ಯ (ಶ್ರಮ ಸಾಮರ್ಥ್ಯ) : ರೂ.30,000/- ವರೆಗೆ**
6. **ಶ್ರಮ ಸಂಸಾರ ಸಾಮರ್ಥ್ಯ ತರಬೇತಿ ಸೌಲಭ್ಯ:** ನೋಂದಾಯಿತ ಫಲಾನುಭವಿಯ ಅವಲಂಭಿತರಿಗೆ (ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
7. **ವಸತಿ ಸೌಲಭ್ಯ (ಕಾರ್ಮಿಕ ಗೃಹ ಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ
8. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀ ಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಕ್ಕಳಿಗೆ ಹೆಣ್ಣು ಮಗುವಿನ ಜನನಕ್ಕೆ ರೂ. **30,000/-** ಮತ್ತು ಗಂಡು ಮಗುವಿನ ಜನನಕ್ಕೆ **ರೂ.20,000/-**
9. **ಶಿಶು ಪಾಲನಾ ಸೌಲಭ್ಯ:**
10. **ಅಂತ್ಯಕ್ರಿಯೆ ವೆಚ್ಚ : ರೂ.4,000/-** ಹಾಗೂ ಅನುಗ್ರಹ ರಾಶಿ **ರೂ.50,000/-**ಸಹಾಯಧನ
11. **ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ):** ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:

| ಕ್ರಸಂ | ತರಗತಿ (ಉತ್ತೀರ್ಣಕ್ಕೆ) | ವಾರ್ಷಿಕ ಸಹಾಯ ಧನ | |
|---|---|---|---|
| | | ಗಂಡು | ಹೆಣ್ಣು |
| 1. | ನರ್ಸರಿ | 3,000 | 4,000 |
| 2. | 1 ರಿಂದ 4ನೇ ತರಗತಿ | 3,000 | 4,000 |
| 3. | 5 ರಿಂದ 8ನೇ ತರಗತಿ | 5,000 | 6,000 |
| 4. | 9 ಹಾಗೂ 10ನೇ ತರಗತಿ | 10,000 | 11,000 |
| 5. | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | 10,000 | 14,000 |
| 6. | ಐಟಿಐ | 12,000 | 15,000 |
| 7. | ಪದವಿ ಪ್ರತಿ ವರ್ಷಕ್ಕೆ | 15,000 | 20,000 |

| | | | |
|---|---|---|---|
| 8. | ಸ್ನಾತಕೋತ್ತರ ಪದವಿ ಸೇರ್ಪಡೆಗೆ | 20,000 | 20,000 |
| | ಪ್ರತಿ ವರ್ಷಕ್ಕೆ | 20,000 | 25,000 |
| 9. | ಇಂಜಿನಿಯರಿಂಗ್ ಕೋರ್ಸ್ ಬಿಇ/ ಬಿ.ಟೆಕ್ ಸೇರ್ಪಡೆಗೆ | 25,000 | 25,000 |
| | ಪ್ರತಿ ವರ್ಷಕ್ಕೆ | 25,000 | 30,000 |
| 10. | ವೈದ್ಯಕೀಯ ಕೋರ್ಸ್‌ಗೆ ಸೇರ್ಪಡೆಗೆ | 30,000 | 30,000 |
| | ಪ್ರತಿ ವರ್ಷಕ್ಕೆ | 40,000 | 50,000 |
| 11. | ಡಿಪ್ಲೋಮಾ | 15,000 | 20,000 |
| 12. | ಎಂ.ಟೆಕ್ / ಎಂ.ಇ | 30,000 | 35,000 |
| 13. | ಎಂ.ಡಿ (ವೈದ್ಯಕೀಯ) | 45,000 | 55,000 |
| 14. | ಪಿಹೆಚ್‌ಡಿ (ಪ್ರತಿ ವರ್ಷಕ್ಕೆ) ಗರಿಷ್ಠ 03 ವರ್ಷ | 25,000 | 30,000 |

12. **ವೈದ್ಯಕೀಯ ಸಹಾಯಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಬಿತರಿಗೆ **ರೂ.300/- ರಿಂದ ರೂ.10,000/-ವರೆಗೆ**
13. **ಅಪಘಾತ ಪರಿಹಾರ:** ಮರಣ ಹೊಂದಿದ್ದಲ್ಲಿ **ರೂ.5,00,000/-,** ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ.2,00,000/- ಮತ್ತು** ಭಾಗಶಃ ಶಾಶ್ವತ ದುರ್ಬಲತೆಯಾದಲ್ಲಿ **ರೂ.1,00,000/-**
14. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ):** ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರ ಪಿಂಡದಲ್ಲಿನ ಕಲ್ಲು ತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯೂಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-ವರೆಗೆ**
15. **ಮದುವೆ ಸಹಾಯಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ ತಲಾ **ರೂ.50,000/-**
16. **ಎಲ್‌ಪಿಜಿ ಸಂಪರ್ಕ ಸೌಲಭ್ಯ (ಕಾರ್ಮಿಕ ಅನಿಲ ಭಾಗ್ಯ):** ಅನಿಲ ಸಂಪರ್ಕದೊಂದಿಗೆ ಎರಡು ಬರ್ನರ್ ಸ್ಟೌವ್
17. **ಬಿಎಂಟಿಸಿ ಬಸ್ ಪಾಸ್ ಸೌಲಭ್ಯ:** ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವಂತಹ / ವಾಸಸ್ಥಳದಿಂದ ಬೆಂಗಳೂರಿಗೆ ಪ್ರಯಾಣಿಸುವ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ
18. **ಕೆಎಸ್‌ಆರ್‌ಟಿಸಿ ಬಸ್ ಪಾಸ್‌ನ ಸೌಲಭ್ಯ:** ರಾಜ್ಯದಾದ್ಯಂತ ವಿದ್ಯಾಭ್ಯಾಸದಲ್ಲಿ ತೊಡಗಿರುವ ನೋಂದಾಯಿತ ಕಾರ್ಮಿಕರ ಇಬ್ಬರು ಮಕ್ಕಳಿಗೆ ( ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
19. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವ ಶಿಕ್ಷಣ ಮತ್ತು ಪೌಷ್ಟಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ.6,000/-** ಗಳ ಸಹಾಯಧನ.

# ಅನುಬಂಧ-2

## ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಸುನೀಲ್ ವಲ್ಯಾಪುರ್ ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 972

ಕಾರ್ಮಿಕ ಕಲ್ಯಾಣ ಮಂಡಳಿಯಿಂದ ಕಳೆದ 3 ವರ್ಷಗಳಲ್ಲಿ ಕಲಬುರ್ಗಿ ಮತ್ತು ಯಾದಗಿರಿ ಜಿಲ್ಲೆಗಳ ಸಂಘಟಿತ

| ಕ್ರ.ಸಂ | ಜಿಲ್ಲೆ | 2018-19 | | 2019-20 | | 2020-21 | |
|---|---|---|---|---|---|---|---|
| | | ಫಲಾನುಭವಿಗಳು | ಮೊತ್ತ | ಫಲಾನುಭವಿಗಳು | ಮೊತ್ತ | ಫಲಾನುಭವಿಗಳು | ಮೊತ್ತ |
| 1 | ಕಲಬುರ್ಗಿ | 37 | 1,60,000 | 37 | 1,80,000 | 39 | 1,91,000 |
| 2 | ಯಾದಗಿರಿ | 8 | 45,000 | 6 | 37,000 | 33 | 1,51,000 |

ಕಾರ್ಮಿಕರಿಗೆ ಕಲ್ಯಾಣ ಯೋಜನೆಗಳಡಿಯಲ್ಲಿ ವೆಚ್ಚ ಮಾಡಲಾದ ವರ್ಷವಾರು ಮತ್ತು ಜಿಲ್ಲಾವಾರು ವಿವರಗಳು